"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನ ಪರಿಷತ್ತು

22ನೇ ಜುಲೈ 2019
ಸೋಮವಾರ

## ವಿಷಯಾನುಕ್ರಮಣಿಕೆ

1. ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಮುಂದುವರೆದ ಧರಣಿ.

2. ಚುನಾವಣಾ ಪ್ರಸ್ತಾವಗಳು

ಡಾ:ಜಯಮಾಲ(ಸಭಾನಾಯಕರು)

----

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(97) 22.07.2019 KG.GR 01.00

**ಕರ್ನಾಟಕ ವಿಧಾನ ಪರಿಷತ್ತು**

**ಸೋಮವಾರ, 22ನೇ ಜುಲೈ 2019**

**ಸದನವು ವಿಧಾನ ಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ**

**ಮಧ್ಯಾಹ್ನ 01 ಗಂಟೆ 02 ನಿಮಿಷಕ್ಕೆ ಸಮಾವೇಶಗೊಂಡಿತು.**

**ಸಭಾಪತಿ (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ) ಅವರು**

**ಪೀಠದಲ್ಲಿ ಉಪಸ್ಥಿತರಿದ್ದರು.**

~~~~~~~

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”
~~~~~~~

1. **ಬಹುಮತ ಕಳೆದುಕೊಂಡಿರುವ ಸರಕಾರಕ್ಕೆ ಸದನ ನಡೆಸುವ ನೈತಿಕತೆ ಇಲ್ಲ ಎಂದು ವಿರೋಧ ಪಕ್ಷದವರಿಂದ ಪ್ರತಿಭಟನೆ ಹಾಗೂ ಮುಂದುವರೆದ ಧರಣಿ.**

(ಸದನ ಪ್ರಾರಂಭವಾಗುತ್ತಿದ್ದಂತೆಯೇ ಧರಣಿ ನಿರತ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು "ಅಲ್ಪ ಮತಕ್ಕೆ ಇಳಿದ ಸರ್ಕಾರ ಹಾಗೂ ಮುಖ್ಯ ಮಂತ್ರಿಗಳು ರಾಜೀನಾಮೆ ಕೊಡಿ" ಎಂದು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)

(ಗೊಂದಲ)

**2.ಚುನಾವಣಾ ಪ್ರಸ್ತಾವಗಳು**

**ಡಾ||ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ವಿಧಾನ ಪರಿಷತ್ತಿನ ಸದನ ಸಮಿತಿಗಳಿಗೆ ಏಕಮತದ ಮೂಲಕ ಸದಸ್ಯರುಗಳನ್ನು ಚುನಾಯಿಸುವ ಪ್ರಸ್ತಾವವನ್ನು ಸದನದ ಮುಂದೆ ಈ ಕೆಳಕಂಡಂತೆ ಮಂಡಿಸುತ್ತಿದ್ದೇನೆ;

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250 (1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಏಳು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349 (2)ನೇ ನಿಯಮದ ಅನುಸಾರವಾಗಿ ಈ ಸಭೆ ವಸತಿ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು ಜನ ಸದಸ್ಯರುಗಳನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಪ್ರಸ್ತಾವಕ್ಕೆ ಸದನದ ಅನುಮೋದನೆ ದೊರೆಯಿತು</u>**

(ಗೊಂದಲ)

**ಸಭಾಪತಿಯವರು:-** ಈಗ ಸದನವನ್ನು ಮಂಗಳವಾರ ದಿನಾಂಕ 23.07.2019ರ ಬೆಳಿಗ್ಗೆ 11 ಗಂಟೆ 30 ನಿಮಿಷಗಳವರೆಗೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 01 ಗಂಟೆ 05 ನಿಮಿಷಗಳಿಗೆ ಮುಕ್ತಾಯಗೊಂಡು
ಪುನಃ ದಿನಾಂಕ 23ನೇ ಜುಲೈ ಮಾಹೆ 2019ರ
ಮಂಗಳವಾರ ಬೆಳಿಗ್ಗೆ 11 ಗಂಟೆ 30 ನಿಮಿಷಗಳಿಗೆ
ಸಮಾವೇಶಗೊಳ್ಳಲು ನಿಶ್ಚಯಿಸಿತು)

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"